ದಾವಣಗೆರೆ, ಮಂಡ್ಯ, ಧಾರವಾಡ, ಬೆಂಗಳೂರು (ಗ್ರಾಮಾಂತರ), ರಾಮನಗರ, ತುಮಕೂರು, ಬೀದರ್, ಮೈಸೂರು, ದಕ್ಷಿಣ ಕನ್ನಡ, ಬೆಂಗಳೂರು (ನಗರ) ಮತ್ತು ಹಾಸನ ಜಿಲ್ಲೆಗಳನ್ನು ಸೇರಿಸಲಾಗಿದ್ದು ಇತರ ಜಿಲ್ಲೆಗಳಲ್ಲಿ ಅವಕಾಶವಿದ್ದಲ್ಲಿ ಅಲ್ಲಿಯೂ ಗಮನ ಹರಿಸಲಾಗುವುದು.

ಇ) ಈ ಕೈಗಾರಿಕಾ ವಲಯಗಳ ಅಭಿವೃದ್ಧಿಪಡಿಸಲು ಯೋಜನಾ ವರದಿಗಳನ್ನು ಸಿದ್ಧಪಡಿಸಲು, ಕ್ರಮ ವಹಿಸಲಾಗಿದ್ದು ಸಧ್ಯದಲ್ಲಿ ಈ ವಲಯಗಳ ಅಭಿವೃದ್ಧಿಗೆ ಯೋಜನಾ ವೆಚ್ಚದ ವಿವರ ಲಭ್ಯವಿರುವುದಿಲ್ಲ.

1032 ಶ್ರೀ ಖಾದರ್ ಯು.ಟಿ. : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರು ವಿಧಾನ ಸಭಾ ಕ್ಷೇತ್ರದಲ್ಲಿ ಕಂದಾಯ ನಿವೇಶನಗಳನ್ನು ಮನೆಗಳನ್ನು/ಬಡಾವಣೆಗಳನ್ನು ನಿರ್ಮಿಸಿಕೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು;

ಇ) ಕಂದಾಯ ನಿವೇಶನಗಳಲ್ಲಿ ನಿರ್ಮಿಸಿಕೊಂಡಿರುವ ಮನೆಗಳನ್ನು ಸಕ್ರಮಗೊಳಿಸುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಹೌದು.

ಆ) ಮತ್ತು ಇ) ಬೇಸಾಯದ ಬಳಕೆಗಾಗಿ ತೆರಿಗೆ ನಿರ್ಧರಿಸಲಾದ ಅಥವಾ ಹಿಡುವಳಿ ಹೊಂದಿರುವ ಭೂಮಿಯ ಯಾವುದೇ ಅದಿಭೋಗದಾರನು ಕರ್ನಾಟಕ ಭೂ ಕಂದಾಯ ಕಾಯ್ದೆಯ ಕಲಂ 95ರ ಅಡಿಯಲ್ಲಿ ಜಿಲ್ಲಾಧಿಕಾರಿಗಳ ಅನುಮತಿಯನ್ನು ಪಡೆಯದೇ ಆ ಭೂಮಿಯನ್ನು ಅಥವಾ ಅದರ ಒಂದು ಭಾಗವನ್ನು ಬೇರೆ ಉದ್ದೇಶಕ್ಕೆ ಉಪಯೋಗಿಸಿಕೊಂಡಿರುವ ಸಂದರ್ಭದಲ್ಲಿ ಅಂತಹ ಉಪಯೋಗವನ್ನು ಕೆಲವು ಷರತ್ತುಗಳಿಗೆ ಒಳಪಟ್ಟು ಸಕ್ರಮಗೊಳಿಸುವ ಬಗ್ಗೆ ಕಾಯ್ದೆಗೆ ತಿದ್ದುಪಡಿ ತರುವ ಪ್ರಸ್ತಾವನೆ ಕಂದಾಯ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ ಹಾಗೂ ಈ ಕುರಿತು ಅಧಿವೇಶನದಲ್ಲಿ ವಿಧೇಯಕವನ್ನು ಮಾಡಿಸಲಾಗಿದೆ.